**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,**

**ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು–560001**

ಸಂಖ್ಯೆ: ಸಿ3(7) ಪ್ರಾ..ಶಿ ವರ್ಗ: 01/2019–20 ದಿನಾಂಕ:–04/09/2019

**ಜ್ಞಾಪನ**

**ವಿಷಯ :** 2018–19ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದ ವರ್ಗಾವಣಾ ಗಣಕೀಕೃತ ಕೌನ್ಸಿಲಿಂಗ್ ಪ್ರಕ್ರಿಯೆಗಳನ್ನು ಮುಂದುವರೆಸುವ ಬಗ್ಗೆ – ವೇಳಾಪಟ್ಟಿಯಲ್ಲಿ ಕೆಲವು ಬದಲಾವಣೆಗಳು

ಉಲ್ಲೇಖ : 1) ಸರ್ಕಾರದ ಆದೇಶ ಪತ್ರ ಸಂಖ್ಯೆ: ಇಪಿ 11 ಇಟಿಆರ್ 2019 ಬೆಂಗಳೂರು, ದಿನಾಂಕ 04/09/2019

2) ಈ ಕಛೇರಿ **ಜ್ಞಾಪನ ಸಮ ಸಂಖ್ಯೆ ದಿನಾಂಕ :** 01.06.2019 ಹಾಗೂ ದಿನಾಂಕ 08/07/2019, ದಿನಾಂಕ 17/07/2019, ದಿನಾಂಕ 30/07/2019, ದಿನಾಂಕ 19/08/2019

––

ವರ್ಗಾವಣೆ ಪ್ರಕ್ರಿಯೆಗಳು ಜಾರಿಯಲ್ಲಿರುವ ಸಂದರ್ಭದಲ್ಲಿ ಶಿಕ್ಷಕರ ವಲಯದಿಂದ ಮುಂದಿಟ್ಟಿದ್ದ ಕೆಲವು ವರ್ಗಾವಣೆ ಸಂಬಂಧಿತ ಬೇಡಿಕೆಗಳನ್ನು ಕಾನೂನಾತ್ಮಕವಾಗಿ ಪರಿಶೀಲಿಸುವ ಸಲುವಾಗಿ ತಾತ್ಕಾಲಿಕವಾಗಿ ವರ್ಗಾವಣೆಗಳನ್ನು ಮುಂದೂಡಲು ಸೂಚಿಸಿದ್ದಂತೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು. ಕಾನೂನಾತ್ಮಕವಾಗಿ ಪರಿಶೀಲಿಸಿದ ನಂತರ ಸದರಿ ಪ್ರಕ್ರಿಯೆಗಳನ್ನು ಜಾರಿಯಲ್ಲಿದ್ದ ನಿಯಮಗಳಂತೆಯೇ ಮುಂದುವರೆಸಿ ಹಮ್ಮಿಕೊಂಡಿದೆ. ಉಲ್ಲೇಖಿತ ಜ್ಞಾಪನಗಳನ್ನು ಮುಂದುವರೆಸುತ್ತಾ ದಿನಾಂಕ 19/08/2019ರ ಜ್ಞಾಪನದಲ್ಲಿನ ವೇಳಾಪಟ್ಟಿಯಲ್ಲಿ ಕೆಳಗಿನಂತೆ ಕೆಲವು ಪರಿಷ್ಕರಣೆಗಳನ್ನು ಮಾಡಿದ್ದು ಉಳಿದಂತೆ ಎಲ್ಲ ಸೂಚನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ. ಪರಿಷ್ಕೃಣೆಗಳನ್ನು ಅನುಸರಿಸಿ ಆಯಾ ಪ್ರಾಧಿಕಾರಿಗಳು ಅಗತ್ಯ ಕ್ರಮ ಕೈಗೊಂಡು ನಿಗದಿತ ದಿನಾಂಕಗಳಂದು ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಕೈಗೊಳ್ಳತಕ್ಕದ್ದು. ಈ ಬಗ್ಗೆ ವರ್ಗಾವಣೆ ಬಯಸಿ ಅರ್ಜಿ ಸಲ್ಲಿಸಿರುವ ಎಲ್ಲಾ ಶಿಕ್ಷಕರ ಗಮನಕ್ಕೆ ವ್ಯಾಪಕವಾಗಿ ಪ್ರಚುರ ಪಡಿಸತಕ್ಕದು.

| ಕ್ರ.ಸಂ | **ವಿವರ** | **ದಿನಾಂಕ** | **ಕ್ರಮ ವಹಿಸುವ ಅಧಿಕಾರಿಗಳು** |
|---|---|---|---|
| 1 ರಿಂದ 20 | ಪ್ರಕ್ರಿಯೆಗಳು ಮುಗಿದಿವೆ | | |
| 21 | ಕಡ್ಡಾಯ ವರ್ಗವಣೆ ನಿಯಮ 21(4) ರಂತೆ – ಯಾವುದೇ ಅಭ್ಯರ್ಥಿ ಇರಲಿಲ್ಲ. | | |
| 22 | ಕಡ್ಡಾಯ ವರ್ಗಾವಣೆ – ಸೆಕ್ಷನ್ 3ಎ(1)(2) ರಂತೆ **ಕೌನ್ಸಿಲಿಂಗ್** | | |
| | 'ಎ' ವಲಯದ ಶಿಕ್ಷಕರನ್ನು 'ಬಿ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್ (ಖಾಲಿ ಹುದ್ದೆಗಳ ಲಭ್ಯತೆಗೆ ಒಳಪಟ್ಟು) ಮತ್ತು<br>'ಎ' ವಲಯದ ಶಿಕ್ಷಕರನ್ನು 'ಸಿ' ವಲಯಕ್ಕೆ ವರ್ಗಾವಣೆಗಾಗಿ ಕೌನ್ಸಿಲಿಂಗ್ (ಶೇ 20ಕ್ಕಿಂತಲೂ ಹೆಚ್ಚಿನ ಹುದ್ದೆಗಳು ಖಾಲಿ ಇರುವ ಘಟಕಕ್ಕೆ ಆದ್ಯತೆಯಲ್ಲಿ ವರ್ಗಾವಣೆಗೊಳಿಸುವುದು). | 07/09/2019 ರಿಂದ 09/09/2019 | ಜಿಲ್ಲಾ ಉಪನಿರ್ದೇಶಕರು |
| 23 | ಕೈಬಿಟ್ಟಿದೆ (ಕ್ರಿಮಿನಲ್/ಶಿಸ್ತು ಪ್ರಕರಣಗಳ ವರ್ಗಾವಣೆಗಳು) | | |
| | ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗಳು – ಮುಂದುವರೆದ ಕ್ರಮಗಳು | | |
| 24 | **ಪರಸ್ಪರ ವರ್ಗಾವಣೆಗೆ ಕೌನ್ಸಿಲಿಂಗ್** ಪ್ರಾಥಮಿಕ ಶಾಲಾ ಶಿಕ್ಷಕರ ವೃಂದ **(ಘಟಕದ ಒಳಗೆ)** | 11/09/2019 | ಜಿಲ್ಲಾ ಉಪನಿರ್ದೇಶಕರು |



4/9/19

| | | | |
|---|---|---|---|
| 25 | ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದವರಿಗೆ **ಘಟಕದ ಹೊರಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್** | 16/09/2019 ರಿಂದ 19/09/2019 | **ವಿಭಾಗದೊಳಗಿನ ಅಂತರ್ ಜಿಲ್ಲಾ ವರ್ಗಾವಣೆಗಳು**– ವಿಭಾಗೀಯ ಸಹ ನಿರ್ದೇಶಕರು (ವಿಭಾಗದ ಕೇಂದ್ರ ಸ್ಥಳದಲ್ಲಿ)<br>**ಅಂತರ್ ವಿಭಾಗದ ವರ್ಗಾವಣೆಗಳು**– ವರ್ಗಾವಣಾ ಪ್ರಾಧಿಕಾರಿಯವರು ಆನ್‌–ಲೈನ್ ನಲ್ಲಿ ಅನುಮೋದಿಸಿರುವ ಪಟ್ಟಿಯನ್ನು ಆಧರಿಸಿ ವಿಭಾಗದ ಕೇಂದ್ರ ಸ್ಥಳದಲ್ಲಿಯೇ ವಿಭಾಗೀಯ ಸಹ ನಿರ್ದೇಶಕರು/ಅಪರ ಆಯುಕ್ತಾಲಯದ ಸಹನಿರ್ದೇಶಕರು ಅಂತರ್ ವಿಭಾಗೀಯ ವರ್ಗಾವಣೆಗಳನ್ನು ಸಹ ನಿರ್ವಹಿಸುವುದು ಮತ್ತು ಪ್ರಾಥಮಿಕ ಶಿಕ್ಷಣ ನಿರ್ದೇಶಕರು ಮೇಲುಸ್ತುವಾರಿ ಕಾರ್ಯವನ್ನು ಕೈಗೊಳ್ಳುವುದು. |
| 26 | ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದವರಿಗೆ ಘಟಕದ ಹೊರಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್(ವಿಶೇಷ ಶಿಕ್ಷಕರು) | 20/09/2019 ರಿಂದ 21/09/2019 | **ವಿಭಾಗದೊಳಗಿನ ಅಂತರ್ ಜಿಲ್ಲಾ ವರ್ಗಾವಣೆಗಳು**– ವಿಭಾಗೀಯ ಸಹ ನಿರ್ದೇಶಕರು (ವಿಭಾಗದ ಕೇಂದ್ರ ಸ್ಥಳದಲ್ಲಿ)<br>**ಅಂತರ್ ವಿಭಾಗದ ವರ್ಗಾವಣೆಗಳು**– ವರ್ಗಾವಣಾ ಪ್ರಾಧಿಕಾರಿಯವರು ಆನ್‌–ಲೈನ್ ನಲ್ಲಿ ಅನುಮೋದಿಸಿರುವ ಪಟ್ಟಿಯನ್ನು ಆಧರಿಸಿ ವಿಭಾಗದ ಕೇಂದ್ರ ಸ್ಥಳದಲ್ಲಿಯೇ ವಿಭಾಗೀಯ ಸಹ ನಿರ್ದೇಶಕರು/ಅಪರ ಆಯುಕ್ತಾಲಯದ ಸಹನಿರ್ದೇಶಕರು ಅಂತರ್ ವಿಭಾಗೀಯ ವರ್ಗಾವಣೆಗಳನ್ನು ಸಹ ನಿರ್ವಹಿಸುವುದು ಮತ್ತು ಪ್ರಾಥಮಿಕ ಶಿಕ್ಷಣ ನಿರ್ದೇಶಕರು ಮೇಲುಸ್ತುವಾರಿ ಕಾರ್ಯವನ್ನು ಕೈಗೊಳ್ಳುವುದು. |
| 27 | **ಪರಸ್ಪರ ವರ್ಗಾವಣೆಗೆ ಕೌನ್ಸಿಲಿಂಗ್‌ಗೆ** ಪ್ರಾಥಮಿಕ ಶಾಲಾ ಶಿಕ್ಷಕರ ವೃಂದ **(ಘಟಕದ ಹೊರಗೆ)**<br>ಒಂದನೇ ಹಂತದಲ್ಲಿ – ವಿಭಾಗದ ಒಳಗೆ<br>ಎರಡನೇಯ ಹಂತದಲ್ಲಿ – ಅಂತರ್ ವಿಭಾಗ | 23/09/2019 | **ವಿಭಾಗದೊಳಗಿನ ಅಂತರ್ ಜಿಲ್ಲಾ ವರ್ಗಾವಣೆಗಳು**– ವಿಭಾಗೀಯ ಸಹ ನಿರ್ದೇಶಕರು (ವಿಭಾಗದ ಕೇಂದ್ರ ಸ್ಥಳದಲ್ಲಿ)<br>**ಅಂತರ್ ವಿಭಾಗದ ವರ್ಗಾವಣೆಗಳು**– ವರ್ಗಾವಣಾ ಪ್ರಾಧಿಕಾರಿಯವರು ಆನ್‌–ಲೈನ್ ನಲ್ಲಿ ಅನುಮೋದಿಸಿರುವ ಪಟ್ಟಿಯನ್ನು ಆಧರಿಸಿ ವಿಭಾಗದ ಕೇಂದ್ರ ಸ್ಥಳದಲ್ಲಿಯೇ ವಿಭಾಗೀಯ ಸಹ ನಿರ್ದೇಶಕರು/ಅಪರ ಆಯುಕ್ತಾಲಯದ ಸಹನಿರ್ದೇಶಕರು ಅಂತರ್ ವಿಭಾಗೀಯ ವರ್ಗಾವಣೆಗಳನ್ನು ಸಹ ನಿರ್ವಹಿಸುವುದು ಮತ್ತು ಪ್ರಾಥಮಿಕ ಶಿಕ್ಷಣ ನಿರ್ದೇಶಕರು ಮೇಲುಸ್ತುವಾರಿ ಕಾರ್ಯವನ್ನು ಕೈಗೊಳ್ಳುವುದು. |

4/9/19

**(ಡಾ॥ ಕೆ.ಜಿ.ಜಗದೀಶ, ಭಾ.ಆ.ಸೇ.,)**
**ಆಯುಕ್ತರು**
**ಸಾರ್ವಜನಿಕ ಶಿಕ್ಷಣ ಇಲಾಖೆ**

**ಇವರಿಗೆ,**

1) **ಸಹ ನಿರ್ದೇಶಕರು, ಬೆಂಗಳೂರು/ಮೈಸೂರು/ಅಪರ ಆಯುಕ್ತರ ಕಛೇರಿ ಕಲ್ಬುರ್ಗಿ/ಧಾರವಾಡ**
2) **ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ**
3) **ಕ್ಷೇತ್ರಶಿಕ್ಷಣಾಧಿಕಾರಿಯವರಿಗೆ (ಆಯಾ ಜಿಲ್ಲಾ ಉಪನಿರ್ದೇಶಕರ ಮುಖಾಂತರ)**

ಪ್ರತಿಯನ್ನು:-

1. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು–1 ಇವರಿಗೆ ವಂದನಾ ಪೂರ್ವಕವಾಗಿ ಸಲ್ಲಿಸಿದೆ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಸಹ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
6. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
7. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ/ಧಾರವಾಡ
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
10. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
11. ಮುಖ್ಯಸ್ಥರು, ಇ–ಗೌರ್ನೆನ್ಸ್, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು–ಪ್ರಸಕ್ತ ವರ್ಗಾವಣೆಗಳಿಗೆ "ತಂತ್ರಾಂಶವನ್ನು" ಸಜ್ಜುಗೊಳಿಸಿ ಅಗತ್ಯ ತಾಂತ್ರಿಕ ಸಹಕಾರವನ್ನು ಒದಗಿಸಲು ಸಂಬಂಧಿತ ತಂಡವನ್ನು ನಿಯೋಜಿಸಲು ಮತ್ತು ವೇಳಾಪಟ್ಟಿಯಂತೆ ಅಗತ್ಯ ಕ್ರಮ ಕೈಗೊಳ್ಳಲು ಕೋರಿದೆ.
12. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ದಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
13. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ
14. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ
15. ಇಲಾಖಾ ವೆಬ್–ಸೈಟ್ನಲ್ಲಿ ಪ್ರಕಟಣೆಗೆ 16. ಕಛೇರಿ ಪ್ರತಿ